ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಷ್ಟ್ರಪತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 26/1/2020

ಗಣರಾಜ್ಯೋತ್ಸವ: ಯುವಕರು, ದೇಶದ ಜನತೆಗೆ ರಾಷ್ಟ್ರಪತಿ ರಾಮ್‌ನಾಥ್ ಕೋವಿಂದ್ ಸಂದೇಶ

# ಗಾಂಧೀಜಿ ಅವರ ಅಹಿಂಸಾ ಮಾರ್ಗ ಅನುಸರಿಸಿ

ವಿಶ್ವವಾಣಿ 26-1-20



**ದೆಹಲಿ:** ರಾಷ್ಟ್ರಪತಿ ರಾಮ್ ನಾಥ್ ಕೋವಿಂದ್ ಅವರು 71ನೇ ಗಣರಾಜ್ಯೋತ್ಸವದ ಮುನ್ನಾದಿನದಂದು ರಾಷ್ಟ್ರವನ್ನುದ್ದೇಶಿಸಿ ಭಾಷಣ ಮಾಡಿದರು. ಭಾರತೀಯ ಸಂವಿಧಾನವು ನಾಗರಿಕರಿಗೆ ಹಕ್ಕುಗಳನ್ನು ನೀಡಿದರೆ, ಅದು ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಕೇಂದ್ರ ಸಿದ್ಧಾಂತಗಳಿಗೆ ಬದ್ಧವಾಗಿದೆ. ಮಹಾತ್ಮ ಗಾಂಧೀಜಿಯವರ ಬೋಧನೆ ಮತ್ತು ಮೌಲ್ಯಗಳನ್ನು ನಮ್ಮ ದೈನಂದಿನ ಜೀವನದಲ್ಲಿ ಅನುಸರಿಸಿದರೆ ಸಂವಿಧಾನವನ್ನು ಅನುಸರಿಸುವುದು ಸುಲಭ ಎಂದು ಹೇಳಿದರು.

ನಮ್ಮ ಸಂವಿಧಾನವು ಮುಕ್ತ ಪ್ರಜಾಪ್ರಭುತ್ವ ರಾಷ್ಟ್ರದ ಪ್ರಜೆಗಳಾಗಿ ನಮಗೆ ಹಕ್ಕುಗಳನ್ನು ನೀಡಿತು. ಆದರೆ ನಮ್ಮ ಪ್ರಜಾಪ್ರಭುತ್ವದ ಕೇಂದ್ರ ಸಿದ್ಧಾಂತಗಳಾದ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವವನ್ನು ಪಾಲಿಸುವ ಜವಾಬ್ದಾರಿಯನ್ನು ನಮ್ಮ ಮೇಲಿಟ್ಟಿದೆ. ನಮ್ಮ ರಾಷ್ಟ್ರಪಿತರ ಜೀವನ ಮತ್ತು ಮೌಲ್ಯಗಳನ್ನು ಗಮನದಲ್ಲಿಟ್ಟುಕೊಂಡರೆ ಈ ಸಾಂವಿಧಾನಿಕ ಆದರ್ಶಗಳನ್ನು ಅನುಸರಿಸುವುದು ನಮಗೆ ಸುಲಭವಾಗುತ್ತದೆ. ಹಾಗೆ ಮಾಡುವುದರಿಂದ, ಗಾಂಧೀಜಿ ಅವರ 150ನೇ ಜನ್ಮದಿನಾಚರಣೆಗೆ ನಾವು ಅರ್ಥಪೂರ್ಣ ಆಯಾಮ ನೀಡಿದಂತೆ ಎಂದು ರಾಷ್ಟ್ರಪತಿ ತಮ್ಮ ಭಾಷಣದಲ್ಲಿ ಹೇಳಿದರು.

ರಾಷ್ಟ್ರದ ಯುವಕರು ನವ ಭಾರತದ ಉಗಮಕ್ಕೆ ಮುಂದಾಗಿದ್ದಾರೆ. ಗಾಂಧಿಯವರ ಬೋಧನೆಗಳು ಅವರ ಹೃದಯಕ್ಕೆ ಹತ್ತಿರವಾಗಿರಬೇಕು. ನಮ್ಮ ಯುವಕರಿಗೆ, ರಾಷ್ಟ್ರವೇ ಪ್ರಥಮ. ಅವರೊಂದಿಗೆ, ನಾವು ನವ ಭಾರತದ ಉಗಮಕ್ಕೆ ಸಾಕ್ಷಿಯಾಗಿದ್ದೇವೆ. ಯಾವುದೇ ಒಂದು ಕಾರಣಕ್ಕಾಗಿ ಹೋರಾಡುವಾಗ, ಜನರು, ವಿಶೇಷವಾಗಿ ಯುವಕರು ಗಾಂಧೀಜಿಯವರ ಅಹಿಂಸಾ ಮಾರ್ಗವನ್ನು ಮರೆಯಬಾರದು ಎಂದು ಕೋವಿಂದ್ ಹೇಳಿದರು.

ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದ ಮೂರು ನೆರೆಯ ರಾಷ್ಟ್ರಗಳ ಅಲ್ಪಸಂಖ್ಯಾತ ನಿರಾಶ್ರಿತರರಿಗೆ ಪೌರತ್ವ ಕಾನೂನು ಜಾರಿಗೆ ತರಲು ಸರಕಾರ ಮುಂದಾದಾಗಿನಿಂದ ದೇಶಾದ್ಯಂತ ಪೌರತ್ವ ಕಾಯಿದೆ, ರಾಷ್ಟ್ರೀಯ ಜನಸಂಖ್ಯಾ ನೋಂದಣಿ ಮತ್ತು ರಾಷ್ಟ್ರೀಯ ನಾಗರಿಕರ ದಾಖಲೆಯಂತಹ ಇತರ ಸರಕಾರಿ ಯೋಜನೆಗಳ ವಿರುದ್ಧ ಕಾಲೇಜು ವಿದ್ಯಾರ್ಥಿಗಳು ವ್ಯಾಪಕ ಪ್ರತಿಭಟನೆಗಳಲ್ಲಿ ಮುಂಚೂಣಿಯಲ್ಲಿದ್ದಾರೆ. ಮೂರು ಅಂಗಗಳ ಹೊರತಾಗಿಯೂ, ದೇಶದ ಸಾಮೂಹಿಕ ಭವಿಷ್ಯವನ್ನು ನಿರ್ಧರಿಸುವ ನಿಜವಾದ ಶಕ್ತಿ ಜನರಿಗೆ ಇದೆ ಎಂದು ರಾಷ್ಟ್ರಪತಿ ಹೇಳಿದರು.

ದೇಶದ ನಾಗರಿಕರನ್ನು ಸಬಲೀಕರಣಗೊಳಿಸಲು ಮತ್ತು ಅವರನ್ನು ಬಡತನದಿಂದ ಹೊರತರಲು ಹಲವಾರು ಸರಕಾರಿ ಕಾರ್ಯಕ್ರಮಗಳು ನಮಗೆ ಸಹಾಯ ಮಾಡಿವೆ. ಭಾರತದ ಬಾಹ್ಯಾಕಾಶ ಕಾರ್ಯಕ್ರಮದ ಬಗ್ಗೆ ಪ್ರತಿಕ್ರಿಯಿಸಿದ ರಾಷ್ಟ್ರಪತಿಯವರು ಇಸ್ರೊ (ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ) ಸಾಧನೆಗಳ ಬಗ್ಗೆ ದೇಶವು ಹೆಮ್ಮೆಪಡುತ್ತದೆ ಎಂದು ಹೇಳಿದರು.

ಗಗನಯಾನ ಕಾರ್ಯಾಚರಣೆಯಲ್ಲಿ ಮತ್ತಷ್ಟು ಪ್ರಗತಿ ಸಾಧಿಸುತ್ತಿದ್ದೇವೆ. ಈ ವರ್ಷ ಮತ್ತಷ್ಟು ವೇಗ ಪಡೆಯುವ ಭಾರತೀಯ ಮಾನವ ಸಹಿತ ಬಾಹ್ಯಾಕಾಶ ಹಾರಾಟವನ್ನು ರಾಷ್ಟ್ರವು ಉತ್ಸಾಹದಿಂದ ಎದುರು ನೋಡುತ್ತಿದೆ ಎಂದು ರಾಷ್ಟ್ರಪತಿ ರಾಮ್‌ನಾಥ್ ಕೋವಿಂದ್ ಹೇಳಿದರು.